KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER :

ದಿನಾಂಕ : DATE :

# ಸಿಕ್ಕಿಂ: ಎಸ್‌ಡಿಎಫ್‌ನ ಹತ್ತು ಶಾಸಕರು ಬಿಜೆಪಿ ಸೇರ್ಪಡೆ

14/8/19



ದೆಹಲಿ: ಒಟ್ಟು 13 ಶಾಸಕರ ಬಲ ಹೊಂದಿದ್ದ ಸಿಕ್ಕಿಂ ಡೆಮಾಕ್ರಟಿಕ್ ಫ್ರಂಟ್ (ಎಸ್‌ಡಿಎಫ್) ಪಕ್ಷದ 10 ಶಾಸಕರು ಭಾರತೀಯ ಜನತಾಪಕ್ಷಕ್ಕೆ ಮಂಗಳವಾರ ಸೇರ್ಪಡೆಗೊಂಡಿದ್ದಾರೆ.

ಇತ್ತೀಚಿನ ಸಿಕ್ಕಿಂ ವಿಧಾನಸಭೆ ಚುನಾವಣೆಯಲ್ಲಿ ಒಂದೂ ಸ್ಥಾನ ಗೆಲ್ಲದಿದ್ದ ಬಿಜೆಪಿಗೆ ಈ ಬೆಳವಣಿಗೆಯಿಂದಾಗಿ ರಾಜ್ಯದಲ್ಲಿನ ಪ್ರಮುಖ ವಿರೋಧ ಪಕ್ಷದ ಸ್ಥಾನಮಾನ ದಕ್ಕಲಿದೆ.ಬಿಜೆಪಿ ಕಾರ್ಯಾಧ್ಯಕ್ಷ ಜೆ.ಪಿ. ನಡ್ಡಾ ಅವರನ್ನು ಭೇಟಿ ಮಾಡಿದ ಸದರಿ ಶಾಸಕರು, ಪಕ್ಷದ ಪ್ರಧಾನ ಕಾರ್ಯದರ್ಶಿ ಹಾಗೂ ಈಶಾನ್ಯ ಭಾರತದಲ್ಲಿನ ಪಕ್ಷದ ವ್ಯವಹಾರಗಳ ಉಸ್ತುವಾರಿಯಾಗಿರುವ ರಾಮ್ ಮಾಧವ್ ಸಮ್ಮುಖದಲ್ಲಿ ಬಿಜೆಪಿಗೆ ಸೇರ್ಪಡೆಗೊಂಡಿದಾರೆ.

ಪಕ್ಷವೊಂದರ ಮೂರನೇ ಎರಡರಷ್ಟು ಅಥವಾ ಅದಕ್ಕಿಂತ ಹೆಚ್ಚಿನ ಸಂಖ್ಯೆಯ ಶಾಸಕರು ಮತ್ತೊಂದು ಪಕ್ಷಕ್ಕೆ ಸೇರಿಕೊಂಡರೆ ಅದು ಪಕ್ಷಾಂತರ ನಿಷೇಧ ಕಾನೂನಿನ ಉಲ್ಲಂಘನೆಯಾಗುವುದಿಲ್ಲ ಎಂಬುದಿಲ್ಲಿ ಉಲ್ಲೇಖನೀಯ.

ಪವನ್ ಕುಮಾರ್ ಚಾಮ್ಲಿಂಗ್ ನೇತೃತ್ವದ ಎಸ್‌ಡಿಎಫ್ ಸಿಕ್ಕಿಂ ರಾಜ್ಯವನ್ನು 25 ವರ್ಷಗಳವರೆಗೆ ಆಳಿದ್ದು, ಸುದೀರ್ಘ ಕಾಲಾವಧಿವರೆಗೆ ಸೇವೆ ಸಲ್ಲಿಸಿದ ಭಾರತದ ಮುಖ್ಯಮಂತ್ರಿ ಎಂಬ ಹೆಗ್ಗಳಿಕೆ ಚಾಮ್ಲಿಂಗ್ ಅವರಿಗೆ ದಕ್ಕಿದೆಯಾದರೂ, ಇತ್ತೀಚಿನ ಚುನಾವಣೆಯಲ್ಲಿ ಅವರು ಅಧಿಕಾರ ಕಳೆದುಕೊಂಡಿದ್ದರು. 32 ಸದಸ್ಯಬಲದ ಸಿಕ್ಕಿಂ ವಿಧಾನಸಭೆಯಲ್ಲಿ ಅವರ ಪಕ್ಷ 15 ಸ್ಥಾನಗಳನ್ನು ಗೆದ್ದಿದ್ದರೆ, ಅವರ ಎದುರಾಳಿ ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾ 17 ಸ್ಥಾನಗಳನ್ನು ಗೆದ್ದಿತ್ತು.

ಆದರೆ, ಇಬ್ಬರು ಎಸ್‌ಡಿಎಫ್ ಸದಸ್ಯರು ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಿದ ಕಾರಣ, ಶಾಸನಸಭೆಯಲ್ಲಿ ಪಕ್ಷದ ಸದಸ್ಯಬಲ 13ಕ್ಕೆ ಇಳಿದಿತ್ತು.